ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ನಿರುದ್ಯೋಗಿ ಇಂಜಿನಿಯರ್ ಪದವೀಧರರ ನೇಮಕಾತಿ

2554 (3004) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1) ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ 30,000 ನಿರುದ್ಯೋಗಿ ಇಂಜಿನಿಯರ್ ಪದವೀಧರರ ನೇಮಕ ಮಾಡಲು ರಾಜ್ಯ ಸರ್ಕಾರವು ತೀರ್ಮಾನಿಸಿದೆಯೆ; ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು?

2) ರಾಜ್ಯದಲ್ಲಿ ಸುಮಾರು ಒಂದು ಲಕ್ಷಕ್ಕೂ ಹೆಚ್ಚು ನಿರುದ್ಯೋಗಿ ಬಿ.ಎಡ್. ಪದವೀಧರರಿರುವಾಗ ಇಂಜಿನಿಯರಿಂಗ್ ಪದವಿಧರರನ್ನು ನೇಮಕ ಮಾಡುವ ಅವಶ್ಯಕತೆಯಾದರೂ ಏನು (ವಿವರ ನೀಡುವುದು)

3) ಇದು ಬಿ.ಎಡ್ ಪದವೀಧರರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೆ; ಈ ಅನ್ಯಾಯವನ್ನು ಪರಿಗಣಿಸಿ ಬಿ.ಎಡ್. ಪದವಿಧರರನ್ನು ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ನೇಮಕ ಮಾಡಲು ಯಾವ ಕ್ರಮ ತೆಗೆದುಕೊಂಡಿದೆ.

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

1), 2) ಇಲ್ಲ.

ಅಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಪ್ರಶ್ನೆ ಉದ್ಭವಿಸುವುದಿಲ್ಲ.

3) ವ್ಯಂದ ಮತ್ತು ನೇಮಕಾತಿ ನಿಯಮಗಳಿಗಾನುಸಾರ ಬಿ.ಎಡ್. ಪದವಿಧರರನ್ನೇ ನೇಮಕ ಮಾಡುತ್ತಿರುವುದರಿಂದ ಅನ್ಯಾಯವಾಗುವ ಪ್ರಶ್ನೆ ಉದ್ಭವಿಸುವುದಿಲ್ಲ.

ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿಮಾಡುವುದು

2565(2989) ಶ್ರೀ ಜಯಪ್ರಕಾಶ್ ಹೆಗಡೆ (ಬ್ರಹ್ಮವರ) :— ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಕಾಲೇಜುಗಳ ಸಂಖ್ಯೆ ಎಷ್ಟು; ಎಲ್ಲಾ ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆಗಳು ಭರ್ತಿಯಾಗಿವೆಯೇ; ಇಲ್ಲವಾದಲ್ಲಿ ಕಾರಣಗಳೇನು;